**1 ನೇ ಹೆಚ್ಚುವರಿ ಜಿಲ್ಲಾ ಮತ್ತು ಸತ್ರ ನ್ಯಾಯಾಲಯ, ಚಿಕ್ಕಮಗಳೂರು**

<u>ಸತ್ರ ಮೊಕದ್ದಮೆ ನಂಃ **43/2024**</u>

| | | |
|---|---|---|
| ಸಾಕ್ಷಿದಾರರ ಹೆಸರು | - ನವೀನ್ | ಪಿಡಬ್ಲ್ಯೂ- 03 |
| ತಂದೆಯ ಹೆಸರು | - ವಿಶ್ವನಾಥ | ಸಿಡಬ್ಲ್ಯೂ -04 |
| ವಯಸ್ಸು | - 36 ವರ್ಷ | |
| ಉದ್ಯೋಗ | - ವ್ಯವಸಾಯ | |
| ವಾಸ ಸ್ಥಳ | - ಸಖರಾಯಪಟ್ಟಣ | |

ದಿನಾಂಕಃ 18-02-2026 ರಂದು ಸಾಕ್ಷಿಗೆ ಪ್ರಮಾಣ ವಚನವನ್ನು ಬೋಧಿಸಲಾಯಿತು.

<u>ಮುಖ್ಯ ವಿಚಾರಣೆ : ವಿಶೇಷ ಸರ್ಕಾರಿ ಅಭಿಯೋಜಕರಿಂದ-</u>

1. ಚಾಸಾ.5 ಗೊತ್ತು. ಚಾಸಾ.1 ಮತ್ತು 11 ನನಗೆ ಗೊತ್ತಿಲ್ಲ. ನ್ಯಾಯಾಲಯದಲ್ಲಿ ಹಾಜರಿರುವ ಆರೋಪಿ ಯಾರೆಂದು ನನಗೆ ಗೊತ್ತಿಲ್ಲ. ನಾನು ಆತನನ್ನು ಈ ಹಿಂದೆ ನೋಡಿಲ್ಲ.

**2.** ಸಾಕ್ಷಿಗೆ ಒಂದು ದಾಖಲೆಯನ್ನು ತೋರಿಸಲಾಗಿ ಅದರಲ್ಲಿರುವ ತನ್ನ ಸಹಿಯನ್ನು ನೋಡಿ ಗುರುತಿಸಿರುತ್ತಾರೆ. ಸದರಿ ದಾಖಲೆ ದಿಃ 25-02-2023 ರಂದು ಸಖರಾಯಪಟ್ಟಣ ಪೊಲೀಸರು ಸಾಕ್ಷಿಯ ಸಮಕ್ಷಮ ಚಾಸಾ.1 ರವರು ಹಾಜರುಪಡಿಸಿದ ಬಟ್ಟೆಗಳನ್ನು ಪೊಲೀಸರು ಅಮಾನತುಪಡಿಸಿಕೊಂಡು ಜರುಗಿಸಿದ್ದಾರೆ ಎನ್ನಲಾದ ಅಮಾನತ್ತು ಪಂಚನಾಮೆಯಾಗಿದ್ದು ಅದನ್ನು ನಿಪಿ.5 ಎಂದು, ಅದರಲ್ಲಿರುವ ಸಾಕ್ಷಿಯ ಸಹಿಯನ್ನು ನಿಪಿ.5(ಎ) ಎಂದು ಗುರುತಿಸಲಾಯಿತು.

**3.** ಈಗ್ಗೆ ಸುಮಾರು ದಿನಗಳ ಹಿಂದೆ ಸದರಿ ಸಹಿಯನ್ನು

ಸಖರಾಯಪಟ್ಟಣ ಪೊಲೀಸ್ ಠಾಣೆಯಲ್ಲಿ ಪೊಲೀಸರು ಹೇಳಿದ ಮೇರೆಗೆ ಮಾಡಿದ್ದೆನು, ಆದರೆ ಯಾವ ವಿಚಾರಕ್ಕೆ ಎಂದು ನನಗೆ ಗೊತ್ತಿಲ್ಲ. ನಾನು ಸಹಿ ಮಾಡಿರುವ ದಾಖಲೆಯಲ್ಲಿ ಬರೆದಿರುವ ವಿಚಾರಗಳು ನನಗೆ ಗೊತ್ತಿಲ್ಲ ಮತ್ತು ಅದನ್ನು ಪೊಲೀಸರು ನನಗೆ ಓದಿ ಹೇಳಿಲ್ಲ. ನನ್ನನ್ನು ಹೊರತುಪಡಿಸಿ ಸದರಿ ದಾಖಲೆಗೆ ಬೇರೆ ಯಾರು ಸಹಿ ಮಾಡಿದ್ದಾರೆ ಎಂದು ನನಗೆ ಗೊತ್ತಿಲ್ಲ. ಪೊಲೀಸರು ನನ್ನ ಸಮಕ್ಷಮ ಯಾವುದೇ ಪಂಚನಾಮೆಯನ್ನು ಜರುಗಿಸಿಲ್ಲ ಮತ್ತು ಏನನ್ನು ಅಮಾನತು ಪಡಿಸಿಕೊಂಡಿಲ್ಲ.

4. ಸಾಕ್ಷಿಗೆ ಒಂದು ಫೋಟೋವನ್ನು ತೋರಿಸಲಾಗಿ ಅದರಲ್ಲಿ ತನ್ನ ಇರುವಿಕೆಯನ್ನು ನೋಡಿ ಗುರುತಿಸಿರುತ್ತಾರೆ. ಸದರಿ ಫೋಟೋವನ್ನು ನಿಪಿ.6 ಎಂದು ಗುರುತಿಸಲಾಯಿತು. ಪೊಲೀಸರು ಹೇಳಿದ ಮೇರೆಗೆ ಸದರಿ ಫೋಟೋಗೆ ನಿಂತುಕೊಂಡೆನು. ಆದರೆ ಸದರಿ ಫೋಟೋವನ್ನು ಯಾವ ವಿಚಾರಕ್ಕೆ ತೆಗೆದುಕೊಳ್ಳಲಾಗಿದೆ ಮತ್ತು ಅದರಲ್ಲಿ ಯಾರೆಲ್ಲಾ ಇದ್ದಾರೆ ಎಂದು ನನಗೆ ಗೊತ್ತಿಲ್ಲ.

(ಈ ಹಂತದಲ್ಲಿ ಸಾಕ್ಷಿಯನ್ನು ಪ್ರತಿಕೂಲ ಸಾಕ್ಷಿಯನ್ನಾಗಿ ಪರಿಗಣಿಸಿ ಪಾಟೀ ಸವಾಲು ಮಾಡಲು ಅಭಿಯೋಜಕರು ಅನುಮತಿ ಕೇಳಿರುತ್ತಾರೆ ದಾಖಲೆಗಳನ್ನು ಪರಿಶೀಲಿಸಿ ಅನುಮತಿ ನೀಡಲಾಯಿತು)

<u>ಪಾಟೀ ಸವಾಲುಃ ವಿಶೇಷ ಸರ್ಕಾರಿ ಅಭಿಯೋಜಕರಿಂದಃ-</u>

**5.** ದಿಃ 25-02-2023 ರಂದು ಸಖರಾಯಪಟ್ಟಣ ಪೊಲೀಸ್ ಠಾಣೆಯಲ್ಲಿ ಚಾಸಾ.1 ರವರು ರಕ್ತದ ಕಲೆಗಳಾಗಿದ್ದ ತಿಳಿ ಗುಲಾಬಿ ಬಣ್ಣದ ಒಂದು ತುಂಬು ತೋಳಿನ ಶರ್ಟು ಮತ್ತು ನೀಲಿ ಬಣ್ಣದ ಕಾಚಾವನ್ನು ಪೊಲೀಸರಿಗೆ ನಮ್ಮ ಸಮಕ್ಷಮ ಹಾಜರುಪಡಿಸಿ ಅವುಗಳನ್ನು ತಾನು ಕೃತ್ಯ ನಡೆದ ಸಮಯದಲ್ಲಿ ಧರಿಸಿದ್ದಾಗಿ ತಿಳಿಸಿದ್ದಾರೆ ಎಂದರೆ ಸರಿಯಲ್ಲ. ನಂತರ ಪೊಲೀಸರು ಸದರಿ ಬಟ್ಟೆಗಳನ್ನು ನಮ್ಮ ಸಮಕ್ಷಮ ನಿಪಿ.5 ರಂತೆ ಬೆಳಿಗ್ಗೆ 11 ಗಂಟೆಯಿಂದ ಮಧ್ಯಾಹ್ನ 12 ಗಂಟೆಯವರೆಗೆ ಪಂಚನಾಮೆಯನ್ನು ಜರುಗಿಸಿ ಅಮಾನತುಪಡಿಸಿಕೊಂಡರು ಅದಕ್ಕೆ ನಮ್ಮ ಸಹಿಗಳನ್ನು ಪಡೆದಿದ್ದಾರೆ ಎಂದರೆ ಸರಿಯಲ್ಲ. ಆ ಸಮಯದಲ್ಲಿ ಪೊಲೀಸರು ನಿಪಿ.6 ರಂತೆ ಫೋಟೋವನ್ನು ತೆಗೆದಿದ್ದಾರೆ ಎಂದರೆ ಸರಿಯಲ್ಲ.

6. ನಾನು 10 ನೇ ತರಗತಿಯವರೆಗೆ ವಿದ್ಯಾಭ್ಯಾಸ ಮಾಡಿದ್ದೇನೆ. ನನಗೆ ಕನ್ನಡ ಭಾಷೆಯಲ್ಲಿ ಓದಲು ಬರೆಯಲು ಬರುತ್ತದೆ. ನೀವು ಯಾವುದೇ ದಾಖಲೆಗೆ ಅದರಲ್ಲಿ ಬರೆದಿರುವುದನ್ನು ಓದಿ ತಿಳಿದುಕೊಳ್ಳದೇ ಸಹಿ ಮಾಡುವುದಿಲ್ಲ ಎಂದರೆ ಸಾಕ್ಷಿ ಸುಮಾರು ಬಾರಿ ಗೊತ್ತಿರುವವರು ಕೇಳಿದಾಗ ಮಾಡಿದ್ದೇನೆ ಎನ್ನುತ್ತಾರೆ. ನಿಮಗೆ ಗೊತ್ತಿರುವವರು ಯಾರು ಕೇಳಿದ ಮೇರೆಗೆ ನೀವು ಗುರುತಿಸಿದ ಸಹಿಯನ್ನು ಮಾಡಿದ್ದೀರಿ ಎಂದರೆ ಸಾಕ್ಷಿ ಪೊಲೀಸರು ಹೇಳಿದ ಮೇರೆಗೆ ಮಾಡಿದ್ದೇನೆ ಎನ್ನುತ್ತಾರೆ.

ಪೊಲೀಸರು ನಿಮ್ಮ ಸಮಕ್ಷಮ ಚಾಸಾ.1 ರವರು ಹಾಜರುಪಡಿಸಿದ ಬಟ್ಟೆಗಳನ್ನು ಅಮಾನತು ಪಡಿಸಿಕೊಂಡು ನಿಪಿ.5 ರಂತೆ ಪಂಚನಾಮೆಯನ್ನು ಜರುಗಿಸಿದ್ದರೂ ಸಹ ಈಗ ಆರೋಪಿಯೊಂದಿಗೆ ಶಾಮೀಲಾಗಿ ಆತನಿಗೆ ಸಹಾಯ ಮಾಡಲು ಸುಳ್ಳು ಸಾಕ್ಷ್ಯ ನುಡಿಯುತ್ತಿದ್ದೀರಿ ಎಂದರೆ ಸರಿಯಲ್ಲ.

ಪಾಟೀ ಸವಾಲು: ಆರೋಪಿಯ ಪರ ವಕೀಲರು ಸಾಕ್ಷಿಯ ಪಾಟೀ ಸವಾಲು ಇಲ್ಲವೆಂದು ನುಡಿದಿರುತ್ತಾರೆ.

(ನನ್ನ ಉಕ್ತಲೇಖನಕ್ಕೆ ತೆರೆದ ನ್ಯಾಯಾಲಯದಲ್ಲಿ ಬೆರಳಚ್ಚು ಮಾಡಲಾಯಿತು).

ಓ.ಹೇ.ಕೇ.ಸ.ಇ.ಎ.ಒ.

ಸಹಿ/-
(ಭಾನುಮತಿ ಬಿ.ಸಿ)
1 ನೇ ಹೆಚ್ಚುವರಿ ಜಿಲ್ಲಾ ಮತ್ತು ಸತ್ರ ನ್ಯಾಯಾಧೀಶರು,
ಚಿಕ್ಕಮಗಳೂರು.

ಸಾಕ್ಷಿಯ ಸಹಿ